ಬ್ರಹ್ಮಾವರ ಮುಖ್ಯ ರಸ್ತೆಯ ಡಾಂಬರೀಕರಣ ಕುರಿತು

1010-ಶ್ರೀ ಪಿ. ಬಸವರಾಜ್ (ಬ್ರಹ್ಮಾವರ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉಡುಪಿ ತಾಲ್ಲೂಕು ಹೆಬ್ರಿ-ಸಂತೆಕಟ್ಟೆ-ಪೇತ್ರಿ-ಬ್ರಹ್ಮಾವರ ಮುಖ್ಯ ರಸ್ತೆಯು ತುಂಬಾ ಹೊಂಡಗಳಿಂದ ಕೂಡಿದ್ದು, ಡಾಂಬರೀಕರಣ ಬಹು ವರ್ಷಗಳಿಂದ ನಡೆಯದೆ ಇರುವುದು ಸರ್ಕಾದದವರ ಗಮನಕ್ಕೆ ಬಂದಿದೆಯೇ?

ಆ) ಆ ರಸ್ತೆಯ ಡಾಂಬರೀಕರಣ ಕುರಿತಂತೆ ಸಾರ್ವಜನಿಕರು ಮನವಿಗಳನ್ನು ಸಲ್ಲಿಸಿರುವರೇ?

ಇ) ಹಾಗಿದ್ದಲ್ಲಿ ಯಾವಾಗ ಆ ರಸ್ತೆಯ ಸಂಪೂರ್ಣ ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳಲಾಗುವುದು?

ಶ್ರಿ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):

ಅ) ಈ ರಸ್ತೆಯಲ್ಲಿ ಅಲ್ಲಲ್ಲಿ ಹೊಂಡಗಳಾಗಿದ್ದು 1.20 ಲಕ್ಷ ರೂ. ಒಟ್ಟು ಅಂದಾಜಿನಲ್ಲಿ ದುರಸ್ತಿಪಡಿಸಲಾಗುತ್ತಿದೆ.

ಆ) ಮನವಿ ಸಲ್ಲಿಸಿದ್ದಾರೆ.

ಇ) ಈ ರಸ್ತೆಯ ಅತ್ಯಂತ ಕೆಟ್ಟು ಹೋದ ಭಾಗಗಳ ಮರು ಡಾಂಬರೀಕರಣವನ್ನು 1.55 ಲಕ್ಷ ರೂ. ಗಳ ವೆಚ್ಚದಲ್ಲಿ ತೆಗೆದುಕೊಳ್ಳಲಾಗಿದೆ. ಈ ರಸ್ತೆಯ ಪೂರ್ಣ ಉದ್ದಕ್ಕೆ (29.60 ಕಿ.ಮೀ) ಮರು ಡಾಂಬರೀಕರಣವನ್ನು ಹಂತ ಹಂತವಾಗಿ ಅನುದಾನದ ಲಭ್ಯತೆಯನ್ನು ಸರಿಸಿ ತೆಗೆದುಕೊಳ್ಳಲಾಗುವುದು.

ಭೀಮಾ ನದಿಯಿಂದ ಚಡಚಾನ್ ಗ್ರಾಮಕ್ಕೆ ಕುಡಿಯುವ ನೀರಿನ ಸರಬರಾಜು.

1015-ಶ್ರೀ ಮನೋಹರ್-ಉ-ಐನಾಪುರ (ಬಳ್ಳೋಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭೀಮಾ ನದಿಯಿಂದ ಚಡಚಾನ್ ಗ್ರಾಮಕ್ಕೆ ಕುಡಿಯುವ ನೀರನ್ನು ಒದಗಿಸುವ ಯೋಜನೆಯು ಅನುಮೋದಿಸಲ್ಪಟ್ಟಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಅನುಮೋದಿಸಲ್ಪಟ್ಟಿದೆ? ಯಾವಾಗ ಪೂರ್ಣಗೊಳಿಸಲಾಗುವುದು ಮತ್ತು ಈ ಯೋಜನೆಗೆ ಎಷ್ಟು ಹಣವನ್ನು ಮೀಸಲಿಡಲಾಗಿದೆ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು):

ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಜಿಲ್ಲಾ ಪರಿಷತ್, ಮಂಡಲ ಪಂಚಾಯಿತಿ ಚುನಾವಣೆ.

1019 - ಶ್ರೀ ಮನೋಹರ ಐನಾಪುರ್ (ಬಳ್ಳೋಳಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯಿತಿ ಸಂಸ್ಥೆಗಳು ಕೆಲಸವನ್ನೇ ಮಾಡುತ್ತಿಲ್ಲ ಎಂಬುದು ಸರ್ಕಾರಕ್ಕೆ ಗೊತ್ತಿದೆಯೇ?